**All India Radio: Bangalore**
**National Bulletin In Kannada**
**19.08.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**19.08.2026 1.10 p.m.**

**<><><><>**

ಮುಖ್ಯಾಂಶಗಳು

1. ಭಾರತದ ಆರ್ಥಿಕ ಪ್ರಗತಿಗೆ ಜಾಗತಿಕ ಮನ್ನಣೆ: ಕೇಂದ್ರ ಸಚಿವ ಅಶ್ವಿನಿ ವೈಷ್ಣವ್
2. ನಾಲ್ಕನೇ ಭಾರತ-ಸಿಂಗಾಪುರ ಸಚಿವರ ಮಟ್ಟದ ದುಂಡುಮೇಜಿನ ಸಭೆ: ಆರ್ಥಿಕ ಬಾಂಧವ್ಯ ಪರಾಮರ್ಶೆ
3. ಕೋಲ್ಕತ್ತಾದ ಹೋಟೆಲ್‌ವೊಂದರಲ್ಲಿ ಅಗ್ನಿ ಅವಘಡ: ೯ ಮಂದಿ ಸಾವು: ಉಪರಾಷ್ಟ್ರಪತಿ, ಪ್ರಧಾನಿ ಸೇರಿದಂತೆ ಗಣ್ಯರಿಂದ ಸಂತಾಪ
4. ಭಾರತ- ಶ್ರೀಲಂಕಾ ಟೆಸ್ಟ್ ಕ್ರಿಕೆಟ್ ಸರಣಿ: ಮೊದಲ ಪಂದ್ಯದ ಅಂತಿಮ ದಿನವಾದ ಇಂದು ಗೆಲುವಿನ ತವಕದಲ್ಲಿ ಭಾರತ
5. ಬಿಡಬ್ಲ್ಯುಎಫ್ ವಿಶ್ವ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್: ಮಿಶ್ರ ಡಬಲ್ಸ್‌ನ ಪ್ರೀ ಕ್ವಾರ್ಟರ್ ಫೈನಲ್ಸ್ ಪ್ರವೇಶಿಸಿದ ಭಾರತದ ತನಿಶಾ - ಧ್ರುವ್ ಜೋಡಿ

<><><><>

ಭಾರತದ ಆರ್ಥಿಕ ಬೆಳವಣಿಗೆಯನ್ನು ಇಂದು ಜಾಗತಿಕ ಮಟ್ಟದಲ್ಲಿ ಗುರುತಿಸಲಾಗುತ್ತಿದ್ದು, ದೇಶ ಶೇಕಡಾ ೬ ರಿಂದ ೮ ರ ಬೆಳವಣಿಗೆ ದರದಲ್ಲಿ ಸಾಗುತ್ತಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ಆಯೋಜಿಸಲಾಗಿದ್ದ ಉತ್ತರಪ್ರದೇಶ - ಜಪಾನ್ ಹೂಡಿಕೆ ಶೃಂಗಸಭೆಯಲ್ಲಿ ಮಾತನಾಡಿದ ಅವರು, ದೇಶದಲ್ಲಿ ಪ್ರತಿವರ್ಷ ಸುಮಾರು ೧೩೦ ಶತಕೋಟಿ ಅಮೆರಿಕನ್ ಡಾಲರ್ ಹೂಡಿಕೆಯಾಗುತ್ತಿದ್ದು, ರೇಲ್ವೆ ಜಾಲದ ಶೇಕಡಾ ೯೯.೬ ರಷ್ಟು ವಿದ್ಯುದ್ದೀಕರಣ ಪೂರ್ಣಗೊಂಡಿದೆ. ಕಳೆದ ದಶಕದಲ್ಲಿ ೩೮ ಸಾವಿರ ಕಿಲೋಮೀಟರ್ ಹೊಸ ರೇಲ್ವೆ ಮಾರ್ಗ, ೧೬೨ ಸೆಮಿ-ಹೈಸ್ಪಿಡ್ ರೈಲುಗಳು ಹಾಗೂ ೬೫ ಸಾವಿರ ಕಿಲೋಮೀಟರ್‌ಗೂ ಹೆಚ್ಚು ಹೆದ್ದಾರಿಗಳನ್ನು ನಿರ್ಮಿಸಲಾಗಿದೆ ಎಂದು ಸಚಿವರು ಮಾಹಿತಿ ನೀಡಿದರು. ಇದೇ ವೇಳೆ ಮಾತನಾಡಿದ ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ರಾಜ್ಯದ ಆಯವ್ಯಯ

ಹಾಗೂ ತಲಾ ಆದಾಯ ಮೂರು ಪಟ್ಟು ಹೆಚ್ಚಾಗಿದ್ದು, ಉತ್ತರ ಪ್ರದೇಶವು ದೇಶದ ಪ್ರಮುಖ ಆರ್ಥಿಕ ಶಕ್ತಿ ಕೇಂದ್ರವಾಗಿ ಹೊರಹೊಮ್ಮಿದೆ ಎಂದರು. ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಮಾತನಾಡಿ, ಕೃಷಿ ಯಾಂತ್ರೀಕರಣದ ಮೂಲಕ ಭಾರತವನ್ನು ಜಗತ್ತಿನ ಆಹಾರದ ಬುಟ್ಟಿಯನ್ನಾಗಿ ಮಾಡುವುದು ಸರ್ಕಾರದ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

<><><>

ಇಂದು ಮತ್ತು ನಾಳೆ ನಡೆಯಲಿರುವ ನಾಲ್ಕನೇ ಭಾರತ-ಸಿಂಗಾಪುರ ಸಚಿವರ ಮಟ್ಟದ ದುಂಡು ಮೇಜಿನ ಸಭೆಯಲ್ಲಿ ಭಾಗವಹಿಸಲು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ನೇತೃತ್ವದ ಉನ್ನತಮಟ್ಟದ ನಿಯೋಗ ಸಿಂಗಾಪುರಕ್ಕೆ ತೆರಳಿದೆ. ನಿಯೋಗದಲ್ಲಿ ಕೇಂದ್ರ ಸಚಿವರಾದ ಡಾ.ಎಸ್.ಜೈಶಂಕರ್, ಪಿಯೂಷ್ ಗೋಯಲ್, ಜಿತಿನ್ ಪ್ರಸಾದ್ ಇದ್ದಾರೆ. ೨೦೨೨ ರಲ್ಲಿ ಪ್ರಾರಂಭವಾದ ಈ ದುಂಡು ಮೇಜಿನ ಸಭೆ ಉಭಯ ದೇಶಗಳ ನಡುವಿನ ದ್ವಿಪಕ್ಷೀಯ ಆರ್ಥಿಕ ಸಹಕಾರವನ್ನು ಪಾರಾಮರ್ಶಿಸುವ ಹಾಗೂ ಹೊಸ ಅವಕಾಶಗಳನ್ನು ಕಂಡುಕೊಳ್ಳುವ ಪ್ರಮುಖ ವೇದಿಕೆಯಾಗಿದೆ. ಈ ಬಾರಿಯ ಸಭೆಯಲ್ಲಿ ಅತ್ಯಾಧುನಿಕ ಉತ್ಪಾದನೆ, ಸಂಪರ್ಕ, ಡಿಜಿಟಲೀಕರಣ, ಆರೋಗ್ಯ ಮತ್ತು ವೈದ್ಯಕೀಯ ಕ್ಷೇತ್ರ, ಕೌಶಲ್ಯಾಭಿವೃದ್ಧಿ ಹಾಗೂ ಸುಸ್ಥಿರತೆ ಎಂಬ ಆರು ವಲಯಗಳ ಅಡಿಯಲ್ಲಿ ಸಾಧಿಸಲಾದ ಪ್ರಗತಿಯನ್ನು ಪರಿಶೀಲಿಸಲಾಗುವುದು. ಈಗಾಗಲೇ ಸಿಂಗಾಪುರ ತಲುಪಿರುವ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರನ್ನು ಭಾರತಕ್ಕೆ ಸಿಂಗಾಪುರದ ಹೈಕಮಿಷನರ್ ಸೈಮನ್ ವಾಂಗ್ ಸ್ವಾಗತಿಸಿದ್ದಾರೆ.

<><><>

ಕೇಂದ್ರ ಗೃಹ ಹಾಗೂ ಸಹಕಾರ ಸಚಿವ ಅಮಿತ್ ಶಾ ಅವರು ಎರಡು ದಿನಗಳ ಭೇಟಿಗಾಗಿ ತಮಿಳುನಾಡಿಗೆ ತೆರಳಲಿದ್ದು, ಚೆನ್ನೈ ಸಮೀಪದ ಕೋವಳಂನಲ್ಲಿ ಆಯೋಜಿಸಲಾಗಿರುವ ದಕ್ಷಿಣ ರಾಜ್ಯಗಳ ಮುಖ್ಯಮಂತ್ರಿಗಳ ಸಮ್ಮೇಳನದಲ್ಲಿ ಪಾಲ್ಗೊಳ್ಳಲಿದ್ದಾರೆ. ಅಮಿತ್ ಶಾ ಅವರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಈ ಮಹತ್ವದ ಸಭೆಯಲ್ಲಿ ತಮಿಳುನಾಡು, ಕೇರಳ, ಆಂಧ್ರಪ್ರದೇಶ, ತೆಲಂಗಾಣ ಹಾಗೂ ಪುದುಚೇರಿ ಕೇಂದ್ರಾಡಳಿತ ಪ್ರದೇಶದ ಮುಖ್ಯಮಂತ್ರಿಗಳು ಮತ್ತು ಉನ್ನತಾಧಿಕಾರಿಗಳು ಭಾಗವಹಿಸಲಿದ್ದಾರೆ.

<><><>

ಮೌಲಾನಾ ಮೊಹಮ್ಮದ್ ಅಲಿ ಜೌಹರ್ ಟ್ರಸ್ಟ್ ಹಾಗೂ ಮೌಲಾನಾ ಮೊಹಮ್ಮದ್ ಅಲಿ ಜೌಹರ್ ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ- ಇಡಿ ಉತ್ತರ ಪ್ರದೇಶದ ರಾಂಪುರ, ಸಹಾರನ್‌ಪುರ ಹಾಗೂ ದೆಹಲಿಯ ೧೦ ಸ್ಥಳಗಳಲ್ಲಿ ಶೋಧ ಕಾರ್ಯಾಚರಣೆ ನಡೆಸಿದೆ. ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆ ೨೦೦೨ ರ ಅಡಿಯಲ್ಲಿ ಈ ದಾಳಿಗಳನ್ನು ಕೈಗೊಳ್ಳಲಾಗಿದ್ದು, ಸರ್ಕಾರಿ ಗುತ್ತಿಗೆಗಳ ಹಣವನ್ನು ಖಾಸಗಿ ಗುತ್ತಿಗೆದಾರರ ಮೂಲಕ ವಿಶ್ವವಿದ್ಯಾಲಯ ಮತ್ತು ಟ್ರಸ್ಟ್‌ನ ಆಸ್ತಿ ನಿರ್ಮಾಣಕ್ಕೆ ಬಳಸಲಾಗಿದೆ ಎಂಬ ಆರೋಪದ ಮೇಲೆ ತನಿಖೆ ನಡೆಯುತ್ತಿದೆ. ಈ ಅಕ್ರಮಕ್ಕೆ ಸಂಬಂಧಿಸಿದ ಹಣಕಾಸು ದಾಖಲೆಗಳು, ಡಿಜಿಟಲ್ ಸಾಕ್ಷ್ಯಗಳು ಹಾಗೂ ಅಪರಾಧದ ಲಾಭದ ಮೂಲಗಳನ್ನು ಪತ್ತೆಹಚ್ಚುವ ನಿಟ್ಟಿನಲ್ಲಿ ಇಡಿ ಅಧಿಕಾರಿಗಳು ಈ ಕಾರ್ಯಾಚರಣೆ ನಡೆಸಿದ್ದಾರೆ.

<><><><>

ಜಮ್ಮು ಮತ್ತು ಕಾಶ್ಮೀರದಲ್ಲಿ ಪ್ರತಿಕೂಲ ಹವಾಮಾನ ಪರಿಸ್ಥಿತಿ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ಶ್ರೀ ಮಾತಾ ವೈಷ್ಣೋದೇವಿ ಶ್ರೈನ್ ಬೋರ್ಡ್, ವೈಷ್ಣೋದೇವಿ ಯಾತ್ರೆಗೆ ಹೊಸ ನೋಂದಣಿಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿದೆ. ಈಗಾಗಲೇ ನೋಂದಣಿ ಮಾಡಿಕೊಂಡು ಪ್ರಮಾಣಿತ ಆರ್‌ಎಫ್‌ಐಡಿ ಕಾರ್ಡ್ ಹೊಂದಿರುವ ಯಾತ್ರಿಕರಿಗೆ ಹವಾಮಾನ ಪರಿಸ್ಥಿತಿ ಮತ್ತು ಅಧಿಕಾರಿಗಳ ನಿರ್ದೇಶನಗಳಿಗೆ ಅನುಗುಣವಾಗಿ ಯಾತ್ರೆ ಮುಂದುವರಿಸಲು ಅವಕಾಶ ನೀಡಲಾಗಿದೆ.

<><><><>

ಪಶ್ಚಿಮ ಬಂಗಾಳದ ಕೋಲ್ಕತ್ತಾದಲ್ಲಿನ ಹೋಟೆಲ್‌ವೊಂದರಲ್ಲಿ ಇಂದು ಮುಂಜಾನೆ ಸಂಭವಿಸಿದ ಅಗ್ನಿ ಅವಘಡದಲ್ಲಿ ೯ ಮಂದಿ ಮೃತಪಟ್ಟಿದ್ದು, ೬ ಮಂದಿ ಗಾಯಗೊಂಡಿದ್ದಾರೆ. ಪೊಲೀಸ್ ಮೂಲಗಳ ಪ್ರಕಾರ, ಬೆಳಗಿನ ಜಾವ ಸುಮಾರು ೨ ಗಂಟೆಗೆ ಬೆಂಕಿ ಕಾಣಿಸಿಕೊಂಡಿದ್ದು, ಅಗ್ನಿಶಾಮಕ ದಳದ ಕೇಂದ್ರ ಕಚೇರಿಯ ಪಕ್ಕದಲ್ಲಿರುವ ಐದು ಅಂತಸ್ತಿನ ಕಟ್ಟಡದ ಮೂರನೇ ಮಹಡಿಯಿಂದ ದಟ್ಟ ಹೊಗೆ ಆವರಿಸಿತ್ತು. ಪ್ರಾಥಮಿಕ ತನಿಖೆಯ ಪ್ರಕಾರ, ಹೋಟೆಲ್‌ನಲ್ಲಿ ಅಗ್ನಿ ಸುರಕ್ಷತಾ ವ್ಯವಸ್ಥೆ ಅಥವಾ ಬೆಂಕಿ ನಂದಿಸುವ ಯಾವುದೇ ವ್ಯವಸ್ಥೆ ಇರಲಿಲ್ಲ ಎಂದು ತಿಳಿದುಬಂದಿದೆ. ಘಟನೆ ಕುರಿತು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಮತ್ತು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ದುಃಖ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಜಾಲತಾಣದ ಪೋಸ್ಟ್‌ನಲ್ಲಿ ಉಪರಾಷ್ಟ್ರಪತಿ, ಮೃತರ ಕುಟುಂಬಗಳಿಗೆ ಸಂತಾಪ

ಸೂಚಿಸಿದ್ದು, ಗಾಯಗೊಂಡವರು ಶೀಘ್ರ ಗುಣಮುಖರಾಗಲಿ ಎಂದು ಹಾರೈಸಿದ್ದಾರೆ. ಅವಘಡದಿಂದ ಸಂತ್ರಸ್ತರಾದವರಿಗೆ ಸ್ಥಳೀಯ ಆಡಳಿತ ಅಗತ್ಯ ನೆರವು ನೀಡುತ್ತಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ತಿಳಿಸಿದ್ದಾರೆ. ದುರಂತದಲ್ಲಿ ತಮ್ಮ ಆತ್ಮೀಯರನ್ನು ಕಳೆದುಕೊಂಡ ಕುಟುಂಬಗಳಿಗೆ ಸಂತಾಪ ಸೂಚಿಸಿರುವ ಅವರು, ಗಾಯಗೊಂಡವರ ಶೀಘ್ರ ಚೇತರಿಕೆಗೆ ಪ್ರಾರ್ಥಿಸಿದ್ದಾರೆ.

<><><>

ಪ್ರಾದೇಶಿಕ ಉದ್ವಿಗ್ನತೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ಮುಂದಿನ ಆದೇಶದವರೆಗೆ ಇರಾನ್‌ನೊಂದಿಗೆ ಎಲ್ಲಾ ವ್ಯಾಪಾರ, ವಾಣಿಜ್ಯ ವಿನಿಮಯ ಮತ್ತು ಹಣಕಾಸು ವಹಿವಾಟುಗಳನ್ನು ಸ್ಥಗಿತಗೊಳಿಸಿರುವುದಾಗಿ ಯುನೈಟೆಡ್ ಅರಬ್ ಎಮಿರೇಟ್ಸ್- ಯುಎಇ ಘೋಷಿಸಿದೆ. ಪ್ರಾದೇಶಿಕ ಹಾಗೂ ಅಂತರರಾಷ್ಟ್ರೀಯ ಭದ್ರತೆಗೆ ಎದುರಾಗಿರುವ ಬೆದರಿಕೆಗಳ ಹಿನ್ನೆಲೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಯುಎಇ ತಿಳಿಸಿದೆ. ಇರಾನ್‌ನಿಂದ ಕೊಲ್ಲಿ ಪ್ರದೇಶದತ್ತ ಉಡಾಯಿಸಲಾದ ಎರಡು ಬ್ಯಾಲಿಸ್ಟಿಕ್ ಕ್ಷಿಪಣಿಗಳನ್ನು ತನ್ನ ವಾಯು ರಕ್ಷಣಾ ವ್ಯವಸ್ಥೆಗಳು ಪತ್ತೆಹಚ್ಚಿವೆ ಎಂದು ಯುಎಇ ಹೇಳಿದೆ. ಈ ಆರೋಪದ ಕುರಿತು ಇರಾನ್ ಇದುವರೆಗೆ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಆದರೆ, ಅಮೆರಿಕದೊಂದಿಗೆ ಶಾಂತಿ ಒಪ್ಪಂದಕ್ಕೆ ಬರುವವರೆಗೆ ಹೋರ್ಮುಜ್ ಜಲಸಂಧಿಯನ್ನು ಮುಚ್ಚಲಾಗುವುದು ಎಂದು ಟೆಹ್ರಾನ್ ಎಚ್ಚರಿಸಿದೆ.

<><><>

ಶ್ರೀಲಂಕಾದ ಗಾಲ್‌ನಲ್ಲಿ ನಡೆಯುತ್ತಿರುವ ಭಾರತ- ಶ್ರೀಲಂಕಾ ನಡುವಿನ ಎರಡು ಪಂದ್ಯಗಳ ಟೆಸ್ಟ್ ಕ್ರಿಕೆಟ್ ಸರಣಿಯ ಮೊದಲನೇ ಪಂದ್ಯದ ಐದನೇ ಹಾಗೂ ಕೊನೆಯ ದಿನವಾದ ಇಂದು ಭಾರತ ನೀಡಿರುವ ೩೭೦ ರನ್‌ಗಳ ಗುರಿಯನ್ನು ಶ್ರೀಲಂಕಾ ಬೆನ್ನತ್ತಿದೆ. ಇತ್ತಿಚಿನ ವರದಿ ಬಂದಾಗ ಶ್ರೀಲಂಕಾ ೬ ವಿಕೆಟ್ ನಷ್ಟಕ್ಕೆ ೧೯೯ ರನ್ ಗಳಿಸಿದ್ದು, ಗೆಲ್ಲಲು ಇನ್ನು ೧೭೩ ರನ್‌ಗಳ ಅಗತ್ಯವಿದೆ. ಭಾರತಕ್ಕೆ ಗೆಲ್ಲಲು ೪ ವಿಕೆಟ್ ಕಬಳಿಸುವ ಅಗತ್ಯವಿದೆ. ಭಾರತದ ಪರ ಮಾನವ್ ಸುತಾರ್ ಮತ್ತು ಪ್ರಸಿದ್ಧ ಕೃಷ್ಣ ತಲಾ ೨ ವಿಕೆಟ್ ಪಡೆದ್ದಿದ್ದರೆ, ಮೊಹಮ್ಮದ್ ಸಿರಾಜ್ ಮತ್ತು ರವೀಂದ್ರ ಜಡೇಜಾ ತಲಾ ೧ ವಿಕೆಟ್ ಪಡೆದಿದ್ದಾರೆ.

<><><>

ನವದೆಹಲಿಯಲ್ಲಿ ನಡೆಯುತ್ತಿರುವ ಬಿಡಬ್ಲ್ಯುಎಫ್ ವಿಶ್ವ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ನ ಮಿಶ್ರ ಡಬಲ್ಸ್ ವಿಭಾಗದಲ್ಲಿ ಭಾರತದ ತನಿಶಾ ಕ್ರಾಸ್ಟೋ ಮತ್ತು ಧ್ರುವ್ ಕಪಿಲಾ ಜೋಡಿ ಪ್ರೀ ಕ್ವಾರ್ಟರ್

ಫೈನಲ್ಸ್ ಪ್ರವೇಶಿಸಿದ್ದಾರೆ. ಇಂದು ನಡೆದ ೩೨ರ ಸುತ್ತಿನ ಪಂದ್ಯದಲ್ಲಿ ಭಾರತದ ಜೋಡಿ, ಮಕಾವ್‌ನ ಲಿಯೋಂಗ್ ಚಾಂಗ್ ಹಾಗೂ ಎಂಗ್ ವೆಂಗ್ ಚಿ ಜೋಡಿ ವಿರುದ್ಧ ೨೧-೧೧, ೨೧-೧೧ ಸೆಟ್‌ಗಳ ಅಂತರದಲ್ಲಿ ಮಣಿಸಿತು. ಇಂದು ನಡೆಯಲಿರುವ ಇತರ ಪ್ರಮುಖ ಪಂದ್ಯಗಳಲ್ಲಿ ಪುರುಷರ ಸಿಂಗಲ್ಸ್‌ನಲ್ಲಿ ಭಾರತದ ಲಕ್ಷ್ಯಸೇನ್, ಆಯೂಷ್ ಶೆಟ್ಟಿ, ಮಹಿಳಾ ಸಿಂಗಲ್ಸ್‌ನಲ್ಲಿ ಪಿ.ವಿ.ಸಿಂಧು, ಉನ್ನತಿ ಹೂಡ ಪ್ರತ್ಯೇಕ ಪಂದ್ಯಗಳಲ್ಲಿ ಕಣಕ್ಕಿಳಿಯುತ್ತಿದ್ದಾರೆ. ಪುರುಷರ ಡಬಲ್ಸ್‌ನಲ್ಲಿ ಎಂ.ಆರ್.ಅರ್ಜುನ್ ಮತ್ತು ಹರಿಹರನ್ ಅಂಸಕರುಣನ್ ಜೋಡಿ ಹಾಗೂ ಸಾತ್ವಿ ಸಾಯಿರಾಜ್ ರಾಂಕಿ ರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ೩ ೨ ರ ಸುತ್ತಿನಲ್ಲಿ ಕಣಕ್ಕಿಳಿಯುತ್ತಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>